# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ, ತುಮಕೂರು-572 103, ☎ :0816-2255650, 2273511 ಫ್ಯಾಕ್ಸ್ : 0816-2270719

ಸಂಖ್ಯೆ:ತುವಿ: ಪ.ವಿ:ವಿ.ನಿ.-03-2018-19:/1103 ದಿನಾಂಕ: 03.11.2018

## ಅಧಿಸೂಚನೆ

**ವಿಷಯ:** ನವಂಬರ್-2018 ರ ಮಾಹೆಯಲ್ಲಿ ನಡೆಯಲಿರುವ ಸ್ನಾತಕ **ಬಿ.ವಿ.ಎ/ ಬಿ.ಎಫ್.ಎ.** ಪದವಿಯ ಅಂತಿಮ ಪರೀಕ್ಷಾ ವೇಳಾಪಟ್ಟಿ, ಪರೀಕ್ಷಾ ಕೇಂದ್ರ ಘೋಷಣೆ ಹಾಗೂ ಪರೀಕ್ಷಾ ಮುಖ್ಯ ಅಧೀಕ್ಷಕರ/ಹೆಚ್ಚುವರಿ ಮುಖ್ಯ ಅಧೀಕ್ಷಕರ ನೇಮಕಾತಿ ಕುರಿತು.

**ಉಲ್ಲೇಖ:**ಮಾನ್ಯ ಕುಲಪತಿಯವರ ಅನುಮೋದನೆಯ ದಿನಾಂಕ:02.11.2018

*****

ನವಂಬರ್-2018 ರ ಮಾಹೆಯಲ್ಲಿ ನಡೆಯಲಿರುವ ಸ್ನಾತಕ **ಬಿ. ವಿ.ಎ/ ಬಿ.ಎಫ್.ಎ.** ಪದವಿಯ I, III, V, VII ಮತ್ತು IX ನೇ ಸೆಮಿಸ್ಟರ್‌ನ ಪರೀಕ್ಷೆಗಳನ್ನು ಈ ಅಧಿಸೂಚನೆಯೊಂದಿಗೆ ಲಗತ್ತಿಸಿರುವ ಅಂತಿಮ ವೇಳಾಪಟ್ಟಿಯಂತೆ ನಡೆಸಲಾಗುವುದು. ಸದರಿ ವೇಳಾಪಟ್ಟಿಯನ್ನು ಸಂಬಂಧಿಸಿದ ಎಲ್ಲಾ ವಿದ್ಯಾರ್ಥಿಗಳ ಗಮನಕ್ಕೆ ತರುವುದು.

**ಪರೀಕ್ಷಾ ಕೇಂದ್ರದ ವಿವರ:**

ಸರ್ಕಾರಿ ಚಿತ್ರಕಲಾ ಮಹಾವಿದ್ಯಾಲಯ, ತುಮಕೂರು ಹಾಗೂ ಡಾ.ಎಂ.ಎಸ್.ಸುಬ್ಬುಲಕ್ಷ್ಮೀ ಲಲಿತಕಲಾ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಈ ಕಾಲೇಜು ಮತ್ತು ವಿಭಾಗಕ್ಕೆ **ಪ್ರಾಯೋಗಿಕ** (Practical) ಮತ್ತು **ಸೈದ್ಧಾಂತಿಕ** (Theory Exams) **ಪರೀಕ್ಷೆಗಳಿಗೆ ವಿಶ್ವವಿದ್ಯಾನಿಲಯ ಕಲಾ ಕಾಲೇಜು, ತುಮಕೂರು** ಇದನ್ನು ಪರೀಕ್ಷಾ ಕೇಂದ್ರವನ್ನಾಗಿ ಘೋಷಿಸಲಾಗಿದೆ.

ಈ ಪರೀಕ್ಷಾ ಕೇಂದ್ರಕ್ಕೆ, **ಪ್ರಾಂಶುಪಾಲರು,** ವಿಶ್ವವಿದ್ಯಾನಿಲಯ ಕಲಾ ಕಾಲೇಜು, ತುಮಕೂರು ಇವರನ್ನು **ಪರೀಕ್ಷಾ ಮುಖ್ಯ ಅಧೀಕ್ಷಕರನ್ನಾಗಿ** ಹಾಗೂ **ಶ್ರೀ ಕರಿಯಣ್ಣ.ಬಿ.** ಮುಖ್ಯಸ್ಥರು, ಡಾ.ಎಂ.ಎಸ್.ಸುಬ್ಬುಲಕ್ಷ್ಮೀ ಲಲಿತ ಕಲಾ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇವರನ್ನು **ಹೆಚ್ಚುವರಿ ಮುಖ್ಯ ಅಧೀಕ್ಷಕರನ್ನಾಗಿ** ನೇಮಕಾತಿ ಮಾಡಲಾಗಿದ್ದು, ಪರೀಕ್ಷಾ ಪೂರ್ವ ಸಿದ್ಧತೆಗಳನ್ನು ಮಾಡಿಕೊಳ್ಳಲು ತಿಳಿಸಲಾಗಿದೆ.

ಪರೀಕ್ಷಾ ಕಾರ್ಯಗಳಲ್ಲಿ ಏನಾದರೂ ಸಮಸ್ಯೆಗಳು ಉಂಟಾದಲ್ಲಿ ಕೂಡಲೇ **ಕುಲಸಚಿವ (ಮೌಲ್ಯಮಾಪನ) ದೂರವಾಣಿ ಸಂಖ್ಯೆ: 0816-2255650, ಉಪಕುಲಸಚಿವ (ಮೌಲ್ಯಮಾಪನ) - 9481266917 ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು** ಇವರುಗಳನ್ನು ಸಂಪರ್ಕಿಸಿ ಮುಂದಿನ ಕ್ರಮ ಕೈಗೊಳ್ಳುವುದು.

**ಪರೀಕ್ಷಾ ಮುಖ್ಯ ಅಧೀಕ್ಷಕರುಗಳಿಗೆ (Examination Chief Superintendent) ಸೂಚನೆಗಳು:**

1. ಪರೀಕ್ಷಾ ಮುಖ್ಯ ಅಧೀಕ್ಷಕರಾಗಿ ಕಾರ್ಯ ನಿರ್ವಹಿಸುವವರು ಪರೀಕ್ಷಾ ದಿನದಂದು ಪರೀಕ್ಷಾ ಸಮಯಕ್ಕಿಂತ **ಅರ್ಧ ಗಂಟೆ ಮುಂಚಿತವಾಗಿ** ಕಾಲೇಜಿಗೆ ಬಂದು ಮೊಹರು ಮಾಡಿದ ಪ್ರಶ್ನೆ ಪತ್ರಿಕೆ ಲಕೋಟೆಯನ್ನು ತಮ್ಮ ಸಮ್ಮುಖದಲ್ಲೇ ತೆರೆದು ಪರೀಕ್ಷಾ ಕೊಠಡಿಗೆ ವಿತರಿಸುವ ವ್ಯವಸ್ಥೆ ಮಾಡಬೇಕು. ಮುಖ್ಯ ಅಧೀಕ್ಷಕರು ಇಲ್ಲದೆ ಇದ್ದಾಗ ಅನಧಿಕೃತವಾಗಿ ಬೇರೆ ಯಾರೂ ಕೂಡ ಪ್ರಶ್ನೆ ಪತ್ರಿಕೆಗಳ ಲಕೋಟೆಯನ್ನು ತೆರೆಯಬಾರದು ಒಂದು ವೇಳೆ ತೆರೆದಲ್ಲಿ ಮುಖ್ಯ ಅಧೀಕ್ಷಕರನ್ನೆ ಹೊಣೆಗಾರರನ್ನಾಗಿ ಮಾಡಲಾಗುವುದು.
2. ಯಾವುದೇ ಕಾರಣಕ್ಕೂ ಪರೀಕ್ಷಾ ಅಕ್ರಮ ಚಟುವಟಿಕೆಗಳು ನಡೆಯದಂತೆ ನೋಡಿಕೊಳ್ಳುವ ಜವಾಬ್ದಾರಿ ಮತ್ತು ಪರೀಕ್ಷಾ ಪಾವಿತ್ರತೆಯನ್ನು ಕಾಪಾಡುವುದು ತಮ್ಮ ಹೊಣೆಗಾರಿಕೆಯಾಗಿರುತ್ತದೆ.
3. Question Paper Code ಗೆ ಅನುಸಾರವಾಗಿ ಉತ್ತರ ಪತ್ರಿಕೆ ಪುಸ್ತಕಗಳನ್ನು Room Superintendents Invigilation Dairy ಯೊಂದಿಗೆ ಪ್ಯಾಕ್ ಮಾಡುವುದು ಹಾಗೂ ಆ ಪ್ಯಾಕ್‌ನ ಮೇಲೆ ದಿನಾಂಕ, ವಿಷಯ, ಕಾಲೇಜಿನ ಕೋಡ್, ಕಾಲೇಜಿನ ಹೆಸರು ಮತ್ತು ವಿಳಾಸ, Question Paper Code ಅನ್ನು ಹಾಗೂ ಬಂಡಲ್‌ನಲ್ಲಿರುವ ಒಟ್ಟು ಉತ್ತರ ಪತ್ರಿಕೆಗಳ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು.
4. ಪ್ರಶ್ನೆ ಪತ್ರಿಕೆಗಳು ಯಾವ ಕಾರಣಕ್ಕೂ ಪರೀಕ್ಷೆಯ ಸಮಯಕ್ಕಿಂತ ಮುಂಚೆ ಬಹಿರಂಗಗೊಳ್ಳದಂತೆ ಮುಖ್ಯ ಅಧೀಕ್ಷಕರು ಸುರಕ್ಷಿತವಾಗಿ ಸಂರಕ್ಷಿಸುವುದು, ಗೌಪ್ಯತೆ ಕಾಪಾಡುವುದಕ್ಕೆ ಮೊದಲ ಆದ್ಯತೆ ನೀಡಲು ತಿಳಿಸಿದೆ.